# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 217
2) ಸದಸ್ಯರ ಹೆಸರು : ಡಾ॥ ತೇಜಸ್ವಿನಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
3) ಉತ್ತರಿಸುವ ದಿನಾಂಕ : 10-12-2018
4) ಉತ್ತರಿಸಬೇಕಾದ ಸಚಿವರು : ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ಕರಾವಳಿ ತೀರವೆಷ್ಟು; ಕಡಲ ಕೊರೆತಕ್ಕೆ ಹಾಳಾದ ಭೂಮಿ ಎಷ್ಟು; ಪರಿಣಾಮಕಾರಿ ಕಡಲು ಕೊರೆತ ತಡೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು; | ರಾಜ್ಯವು 309 ಕಿ.ಮೀ.ಉದ್ದದ ಕರಾವಳಿ ತೀರವನ್ನು ಹೊಂದಿದೆ.<br>ಕಡಲ ಕೊರೆತಕ್ಕೆ ಹಾಳಾದ ಭೂಮಿ ಒಟ್ಟು 21.943 ಕಿ.ಮೀ. ಜಿಲ್ಲಾವಾರು ವಿವರ ಕೆಳಗಿನಂತಿದೆ:-<br>ದಕ್ಷಿಣ ಕನ್ನಡ — 14.00 ಕಿ.ಮೀ<br>ಉಡುಪಿ — 2.743 ಕಿ.ಮೀ.<br>ಉತ್ತರ ಕನ್ನಡ — 5.20 ಕಿ.ಮೀ.<br>ಒಟ್ಟು — 21.943 ಕಿ.ಮೀ.<br>ಕರಾವಳಿಯಲ್ಲಿ ಸಂಭವಿಸುವ ಕಡಲ್ಕೊರೆತವನ್ನು ನಿಯಂತ್ರಿಸಲು ಏಷ್ಯಾ ಅಭಿವೃದ್ಧಿ ಬ್ಯಾಂಕ್‌ನ ಆರ್ಥಿಕ ನೆರವಿನಲ್ಲಿ ರೂ.911.00 ಕೋಟಿ ಮೊತ್ತದ ನಿರಂತರ ಕರಾವಳಿ ತೀರ ಸಂರಕ್ಷಣೆ ಮತ್ತು ನಿರ್ವಹಣೆ ಯೋಜನೆಯನ್ನು ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ. ತೀವ್ರ ಸಮುದ್ರ ಕೊರೆತವಿರುವ ಉಳ್ಳಾಲ ಪ್ರದೇಶದಲ್ಲಿ ರೂ.223.32 ಕೋಟಿ ಮೊತ್ತದ 8 ಇನ್‌ಶೋರ್ ಬರ್ಮ್ಸ್, 2 ಆಫ್‌ಶೋರ್ ರೀಫ್ಸ್ ಮತ್ತು ಬ್ರೇಕ್‌ವಾಟರ್ ಪುನರ್ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. 2ನೇ ಹಂತದಲ್ಲಿ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಯ ಆಯ್ದ 8 ಪ್ರದೇಶಗಳಲ್ಲಿ 54 ಕಿ.ಮೀ. ಉದ್ದದ ತೀರವನ್ನು ಸಂರಕ್ಷಿಸಲು ರೂ.640.00 ಕೋಟಿ ಮೊತ್ತದ ಕಾಮಗಾರಿಗಳು ಪ್ರಗತಿಯಲ್ಲಿವೆ. ಅಲ್ಲದೇ ಇಲಾಖಾ ವಾರ್ಷಿಕ ಅನುದಾನದಲ್ಲಿ CWPRS (Central Water and Power Research Station), Pune & KERS (Karnataka Engineering Research Station), Mandya ತಜ್ಞ ಸಂಸ್ಥೆಗಳಿಂದ ವಿನ್ಯಾಸವನ್ನು ಪಡೆದು ಸಮುದ್ರ ಕೊರೆತವಿರುವ ಪ್ರದೇಶಗಳಲ್ಲಿ ಸಮುದ್ರ ಕೊರೆತ ತಡೆಗೋಡೆ ಕಾಮಗಾರಿಗಳನ್ನು ಕೈಗೊಂಡು ಸಮುದ್ರ ಕೊರೆತವನ್ನು ನಿಯಂತ್ರಿಸಲಾಗುತ್ತಿದೆ. |
| ಆ) | ಕಡಲ ಕೊರೆತ ತಡೆಗೆ ತಡೆಗೋಡೆ ನಿರ್ಮಾಣ ದಂತಹ ಕಾರ್ಯಗಳಿಗೆ ಕೇಂದ್ರ / ರಾಜ್ಯ ನೀಡಿರುವ ಅನುದಾನವೆಷ್ಟು; (ಪ್ರಗತಿಯ ವಿವರ ನೀಡುವುದು) | 2018-19ನೇ ಸಾಲಿನಲ್ಲಿ ಕಡಲ ಕೊರೆತ ತಡೆಗೋಡೆ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಈ ಕೆಳಕಂಡಂತೆ ಅನುದಾನವನ್ನು ಒದಗಿಸಲಾಗಿದೆ. |

| ಯೋಜನೆ | ರಾಜ್ಯ ಸರ್ಕಾರದ ಅನುದಾನ (ರೂ. ಕೋಟಿಗಳಲ್ಲಿ) | ಕೇಂದ್ರ ಸರ್ಕಾರದ ಅನುದಾನ |
|---|---|---|
| ನಿರಂತರ ಕರಾವಳಿ ಸಂರಕ್ಷಣೆ ಮತ್ತು ನಿರ್ವಹಣೆ ಯೋಜನೆ (ಎಡಿಬಿ) | 200.00 | 0.00 |
| 4711 ಸಮುದ್ರ ಕೊರೆತ ತಡೆಗೋಡೆ ನಿರ್ಮಾಣ (ಇಲಾಖಾ ಅನುದಾನ) | 9.86 | 0.00 |

| | | |
|---|---|---|
| ಇ) | ಕಡಲ ಉತ್ಪನ್ನವಾದ ಮೀನಿನ ಸಂಪತ್ತಿನ ಸಂಸ್ಕರಣೆ ಹಾಗೂ ಶೇಖರಣೆಗೆ ಕೈಗೊಂಡಿರುವ ಆಧುನಿಕ ವೈಜ್ಞಾನಿಕ ವಿಧಾನಗಳಾವುವು; | ಹಿಂದೆ ಮೀನಿನ ಸಂಸ್ಕರಣೆ ಮತ್ತು ಶೇಖರಣೆಗೆ ಉಪ್ಪು ಹಾಕಿ ಒಣಗಿಸುವ ವಿಧಾನವನ್ನು ಅನುಸರಿಸಲಾಗುತ್ತಿತ್ತು. ಇತ್ತೀಚಿನ ದಿನಗಳಲ್ಲಿ ವೈಜ್ಞಾನಿಕವಾಗಿ ಮೀನುಗಳ ಸಂಸ್ಕರಣೆ ಮತ್ತು ಶೇಖರಣೆಗೆ ಈ ಕೆಳಗಿನ ವಿಧಾನಗಳನ್ನು ಅನುಸರಿಸಲಾಗುತ್ತಿದೆ.<br><br>1. ಮಂಜುಗಡ್ಡೆ ಉಪಯೋಗಿಸಿ ಮೀನನ್ನು ಸಂರಕ್ಷಿಸುವುದು (Chilled storage using ice)<br>2. ಮೀನಿನ ಘನೀಕರಣ (Freezing), ಕ್ಷಿಪ್ರ ಘನೀಕರಣ (Quick freezing), ಪ್ಲೇಟ್ ಘನೀಕರಣ (Plate Freezing)<br>3. ಡಬ್ಬೀಕರಣ (Canning)<br>4. ಫಿಶ್ ಸುರುಮಿ ತಯಾರಿಕೆ (Fish Surumi) |
| ಈ) | ಮೀನುಗಾರರ ಸಮೂಹದ ಅಭಿವೃದ್ಧಿಗಾಗಿ ಕೈಗೊಂಡಿರುವ ಯೋಜನೆಗಳಾವುವು; ಬಡ ಮೀನುಗಾರ ಮಹಿಳೆಯರು, ಹಿರಿಯ ಹಾಗೂ ವಿಧವಾ ಮಹಿಳೆಯರಿಗೆ ವಿಶೇಷವಾಗಿ ಯಾವುದಾದರೂ ಯೋಜನೆಗಳಿವೆಯೇ? (ಇದ್ದಲ್ಲಿ ಅವುಗಳ ಮಾಹಿತಿಯನ್ನು ನೀಡುವುದು) | ಮೀನುಗಾರರ ಸಮೂಹದ ಅಭಿವೃದ್ಧಿಗಾಗಿ ಕೈಗೊಂಡಿರುವ ಯೋಜನೆಗಳ ವಿವರವನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ. |

ಸಂಖ್ಯೆ: ಪಸಂಮೀ 135 ಮೀಇಇ 2018

(ವೆಂಕಟರಾವ್ ನಾಡಗೌಡ)
ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ತೇಜಸ್ವಿನಿ ಗೌಡ ಇವರ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 217ರ

# ಅನುಬಂಧ

**ಮೀನುಗಾರರ ಸಮೂಹದ ಅಭಿವೃದ್ಧಿಗಾಗಿ ಕೈಗೊಂಡಿರುವ ಯೋಜನೆಗಳು:**

1. **ಮೀನುಮರಿ ಖರೀದಿಸಲು ನೆರವು:** ಮೀನು ಕೃಷಿಕರು ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/- ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು.

2. **ಒಳನಾಡು ಮೀನುಗಾರರಿಗೆ ಫೈಬರ್‌ಗ್ಲಾಸ್ ಹರಿಗೋಲುಗಳ ವಿತರಣೆ:** ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಉಚಿತವಾಗಿ ನೀಡಲಾಗುವುದು.

3. **ಸಂಕಷ್ಟ ಪರಿಹಾರ ನಿಧಿ:** ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.3.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1.00 ಲಕ್ಷ ಪರಿಹಾರ ನೀಡಲಾಗುವುದು. ಅಲ್ಲದೆ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.1.00 ಲಕ್ಷ ಪರಿಹಾರ ನೀಡಲಾಗುವುದು.

4. **ಮತ್ಸ್ಯಾಶ್ರಯ ಯೋಜನೆ:** ವಸತಿ ರಹಿತ ಮೀನುಗಾರರಿಗೆ ಈ ಯೋಜನೆಯಡಿ ಮನೆ ನಿರ್ಮಾಣಕ್ಕೆ ಸಾಮಾನ್ಯ ಮೀನುಗಾರರಿಗೆ ರೂ.1.20 ಲಕ್ಷ, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ಫಲಾನುಭವಿಗಳಿಗೆ ಗ್ರಾಮೀಣ ಪ್ರದೇಶದಲ್ಲಿ ರೂ 1.75 ಲಕ್ಷ ಹಾಗೂ ನಗರ ಪ್ರದೇಶದಲ್ಲಿ ರೂ 2.00 ಲಕ್ಷ ಸಹಾಯಧನ ನೀಡಲಾಗುವುದು.

5. **ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ:** ಮೀನುಗಾರಿಕೆ ದೋಣಿಗಳು ಬಳಸುವ ಡೀಸೆಲ್ ಮೇಲಿನ ರಾಜ್ಯ ಮಾರಾಟ ಕರಕ್ಕೆ ಸಮನಾದ ಮೊತ್ತವನ್ನು ಸಹಾಯಧನವಾಗಿ ದೋಣಿಗಳ ಮಾಲೀಕರ ಬ್ಯಾಂಕ್ ಖಾತೆಗೆ ನೇರವಾಗಿ ಬಿಡುಗಡೆ ಮಾಡುವ ಮೂಲಕ ಮರುಪಾವತಿ ಮಾಡಲಾಗುವುದು ವಾರ್ಷಿಕ 1,50,000 ಕಿಲೋ ಲೀಟರ್ ಡೀಸೆಲ್ ಮೇಲಿನ ಮಾರಾಟಕರ ಮರುಪಾವತಿ ಮಾಡಲಾಗುವುದು.

6. ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿನ ಮೋಟರೀಕೃತ ನಾಡದೋಣಿಗಳಿಗೆ 2018-19ನೇ ಸಾಲಿನ ಅಕ್ಟೋಬರ್ ತಿಂಗಳಿನಿಂದ ಸೀಮೆಎಣ್ಣೆ ವಿತರಿಸಲು ಬೇಕಾಗುವ ಅನುದಾನವನ್ನು ಮೀನುಗಾರಿಕೆ ಇಲಾಖೆಯಿಂದಲೇ ಭರಿಸಲು ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಸೂಚಿಸಿರುವುದರಿಂದ, ಮೀನುಗಾರಿಕೆ ಇಲಾಖೆಯಿಂದಲೇ ಭರಿಸಲು ಕ್ರಮವಹಿಸಲಾಗಿದೆ.

7. **ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ** ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಒಳಗೊಂಡ ರೂ.10,000-00 ಮೌಲ್ಯದ ಕಿಟ್ ನೀಡಲಾಗುವುದು.

8. **ಮಂಜುಗಡ್ಡೆ ಸ್ಥಾವರಗಳು ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ :** ಈ ಯೋಜನೆಯಡಿ ಕರಾವಳಿಯಲ್ಲಿನ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.50 ಲಕ್ಷ ಸಹಾಯಧನ ನೀಡಲಾಗುವುದು.

9. **ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ:** ಈ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು.

10. **ಸಾಮೂಹಿಕ ವಿಮಾ ಯೋಜನೆ:** ರಾಜ್ಯದ 2.04 ಲಕ್ಷ ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲಾಗಿದೆ. ಈ ಯೋಜನೆಯಡಿ ಮೀನುಗಾರಿಕೆಯಲ್ಲಿ ತೊಡಗಿರುವಾಗ ಆಕಸ್ಮಿಕವಾಗಿ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.2,00,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1,00,000/- ಗಳ ಪರಿಹಾರ ನೀಡಲಾಗುವುದು.

11. **ಗಿರಿಜನ ಉಪ ಯೋಜನೆ:** ಈ ಯೋಜನೆಯಡಿ ಪರಿಶಿಷ್ಠ ಪಂಗಡದ ಮೀನುಗಾರರಿಗೆ ಅನುಕೂಲವಾಗುವಂತೆ ಸಂಚಾರಿ/ ರೀಟೇಲ್ ಮೀನು ಖಾದ್ಯಗಳ ಕ್ಯಾಂಟೀನ್/ ತಾಜಾ ಮೀನು ಮಾರಾಟ ಮಳಿಗೆ ಸ್ಥಾಪಿಸಲು ಸಹಾಯ ಘಟಕ ವೆಚ್ಚ ರೂ 10.00 ಲಕ್ಷಗಳ ಮೇಲೆ 70% ಸಹಾಯಧನ ನೀಡಲಾಗುವುದು.

12. **ಮತ್ಸ್ಯ ಕೃಷಿ ಆಶಾ ಕಿರಣ:** ಯೋಜನೆಯಡಿ 2,500 ಹೆಕ್ಟೇರ್ ವಿಸ್ತೀರ್ಣ ಕೆರೆಗಳಲ್ಲಿ ಮೀನು ಉತ್ಪಾದನೆಯನ್ನು ಹೆಚ್ಚಿಸಲು ಹಾಗೂ ಮೀನು ಕೃಷಿಗೆ ಉತ್ತೇಜನ ನೀಡಲು, ಪ್ರತಿ ಹೆಕ್ಟೇರ್‌ಗೆ 4,000 ಬಲಿತ ಮೀನು ಮರಿಗಳನ್ನು ಹಾಗೂ 2 ಟನ್ ಕೃತಕ ಆಹಾರವನ್ನು ಖರೀದಿಸಲು ಘಟಕ ವೆಚ್ಚದ ಶೇ.50 ರಷ್ಟು ಹಾಗೂ ಗರಿಷ್ಠ 27,000 ರೂ.ಗಳನ್ನು ನೀಡಲಾಗುವುದು.

13. **ಜಲಾಶಯಗಳಲ್ಲಿ ಮೀನುಮರಿ ಬಿತ್ತನೆ:** ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನುಮರಿ (Advanced fingerlings) ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳಲಾಗುವುದು.

14. **ಕ್ಲಸ್ಟರ್ ಮಾದರಿಯಲ್ಲಿ ಮೀನುಗಾರಿಕೆ ಅಭಿವೃದ್ಧಿ:** ಸಮಗ್ರ ಮೀನು ಕೃಷಿಗೆ ಕ್ಲಸ್ಟರ್ ಮಾದರಿಯಲ್ಲಿ ಆಯ್ದ 14 ಜಂಟಿ ತಾಲ್ಲೂಕುಗಳಲ್ಲಿ ಸಮಗ್ರವಾಗಿ ಮತ್ತು ಸುಸಂಘಟಿತ ಮಾದರಿಯಲ್ಲಿ ಮೀನು ಕೃಷಿಯ ಅಭಿವೃದ್ಧಿಯನ್ನು ಕೈಗೊಳ್ಳಲಾಗುವುದು. ಈ ಯೋಜನೆಯಡಿ ಕೃಷಿಕರಿಗೆ ಮೀನು ಸಾಕಾಣಿಕೆಗೆ ಕೊಳ ಮತ್ತು ಇತರೆ ಮೂಲಭೂತ ಸೌಕರ್ಯಗಳ ಸೃಷ್ಟಿಗೆ ಸಹಾಯಧನ ನೀಡಲಾಗುವುದು.

15. **ಮತ್ಸ್ಯ ಜೋಪಾಸನೆ:** ಮೀನು ಮಾರಾಟಗಾರರು ಮಾರಾಟವಾಗದೇ ಉಳಿಯುವ ಮೀನನ್ನು ಮೀನು ಮಾರುಕಟ್ಟೆಗಳಲ್ಲಿ ಶೀಥಲೀಕೃತ ಘಟಕದಲ್ಲಿ ಸಂಗ್ರಹಿಸಲು ರಾಜ್ಯದ ಆಯ್ದ 10 ಮಾರುಕಟ್ಟೆಗಳಲ್ಲಿ ಶಿಥಲೀಕೃತ ಘಟಕಗಳನ್ನು ತಲಾ ರೂ.10 ಲಕ್ಷ ವೆಚ್ಚದಲ್ಲಿ ಸ್ಥಾಪಿಸಲಾಗುವುದು.

16. **ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ:** ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಹಾಗೂ ಮೊದಲ ವರ್ಷದ ಆವರ್ತಕ ವೆಚ್ಚದ ಶೇಕಡ 25 ರಷ್ಟು ಗರಿಷ್ಠ ರೂ.30,000/- ಸಹಾಯಧನ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.5000 ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 250 ಸಾಮಾನ್ಯಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

17. **ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ:** ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.2000 ಸಹಾಯಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.10000/- ಗಳ ಸಹಾಯಧನವನ್ನು ನೀಡಲಾಗುವುದು. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.35,000 ಗಳ ಸಹಾಯಧನವನ್ನು ಮೂರು ಅಥವಾ ನಾಲ್ಕು ಫಲಾನುಭವಿಗಳ ಒಂದು ಗುಂಪಿಗೆ ನೀಡಲಾಗುವುದು. ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

18. **ನೀಲಿ ಕ್ರಾಂತಿ – ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ:** ಕೇಂದ್ರ ಸರ್ಕಾರದ ನೀಲಿಕ್ರಾಂತಿ ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಮತ್ತು ನಿರ್ವಹಣೆ ಯೋಜನೆಯಡಿ ಕರಾವಳಿ ಮೀನುಗಾರಿಕೆ, ಮೂಲಭೂತ ಸೌಲಭ್ಯ ಮತ್ತು ಹಿಡುವಳಿ ನಂತರದ ಕಾರ್ಯಾಚರಣೆಗಳ ಅಭಿವೃದ್ಧಿ, ಮೀನುಗಾರರ ಕಲ್ಯಾಣಕ್ಕಾಗಿ ರಾಷ್ಟ್ರೀಯ ಯೋಜನೆ, ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿ ಮತ್ತು ಅದರ ಚಟುವಟಿಕೆಗಳು ಮತ್ತು ಇತರೆ ಕಾರ್ಯಕ್ರಮಗಳನ್ನು ಸಾಮಾನ್ಯ ವರ್ಗದವರಿಗೆ ಶೇ 40ರಷ್ಟು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ವಿಶೇಷ ವರ್ಗಕ್ಕೆ ಶೇ 60 ರಷ್ಟು ನೆರವಿನೊಂದಿಗೆ ಅನುಷ್ಠಾನಗೊಳಿಸಲು ಅವಕಾಶ ಕಲ್ಪಿಸಲಾಗಿದೆ.

**ಮೀನುಗಾರ ಮಹಿಳೆಯರಿಗಾಗಿ ವಿಶೇಷವಾಗಿ ಇರುವ ಯೋಜನೆ:**

1. **ಮಹಿಳಾ ಮೀನುಗಾರರಿಗೆ ಶೂನ್ಯ ಬಡ್ಡಿಯಲ್ಲಿ ಸಾಲ ವಿತರಣೆ:** ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಸಾಲವನ್ನು ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ.

******